MediaTAR
...Tracking, Analysis & Reportage

| | | | |
|---|---|---|---|
| **PUBLICATION** | Samyuktha Karnataka | **DATE** | 11.02.2019 |
| **EDITION** | Bangalore | **PAGE NO** | 03 |
| **HEADLINE** | Ultimate aim of Education is not Employment, but Empowerment & Enlightenment, says Honourable Vice President of India, M. Venkaiah Naidu | | |

# ಜ್ಞಾನ ಸಂಪಾದನೆಯಿಂದ ವಿಶ್ವ ಪ್ರಜೆಗಳಾಗಿ

ಸಂ.ಕ.ಸಮಾಚಾರ ಬೆಂಗಳೂರು

'ಪ್ರಾಚೀನ ಭಾರತವು ವೈದ್ಯಕೀಯ ಪದ್ಧತಿ, ಐತಿಹಾಸಿಕ ಪರಂಪರೆ ಹಾಗೂ ಶಿಕ್ಷಣ ಪದ್ಧತಿ ಮೂಲಕ 'ವಿಶ್ವಗುರು'ವಾಗಿ ಗುರುತಿಸಿಕೊಂಡಿದ್ದು ಇದೇ ನಿಟ್ಟಿನಲ್ಲಿ ದೇಶದ ಯುವಕರು ಜ್ಞಾನಾರ್ಜನೆಯ ಮೂಲಕ 'ವಿಶ್ವ ಪ್ರಜೆ'ಗಳಾಗಿ ಹೊರಹೊಮ್ಮಬೇಕು' ಎಂದು ಉಪರಾಷ್ಟ್ರಪತಿ ಎಂ.ವೆಂಕಯ್ಯನಾಯ್ಡು ಹೇಳಿದರು.

ಹೆಣ್ಣೂರು ಮುಖ್ಯರಸ್ತೆಯಲ್ಲಿರುವ ಸಿಎಂಆರ್ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್ ಉದ್ಘಾಟನಾ ಸಮಾರಂಭದಲ್ಲಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ಕ್ರೀಡಾ ವಲಯ ಹಾಗೂ ತಂತ್ರಜ್ಞಾನ ಕಲಿಕೆಯಲ್ಲಿ ಜ್ಞಾನಾರ್ಜನೆಯನ್ನು ಹೆಚ್ಚಿಸಿಕೊಳ್ಳಬೇಕು. ಹೊಸ ಹೊಸ ಆವಿಷ್ಕಾರಗಳನ್ನು ಕಂಡುಹಿಡಿಯುವ ಮೂಲಕ ವಿಶ್ವ ಪ್ರಜೆಗಳಾಗಿ ಬಾಳಬೇಕು' ಎಂದು ಹೇಳಿದರು.

'ದೇಶವು ಈ ಹಿಂದಿನಿಂದಲೂ ಕೂಡ ಶಿಕ್ಷಣಕ್ಕೆ ಹೆಚ್ಚಿನ ಪ್ರಾಧಾನ್ಯತೆ ಒದಗಿಸಿದೆ. ಇದಕ್ಕೆ ನಳಂದ, ತಕ್ಷಶಿಲ ವಿಶ್ವವಿದ್ಯಾಲಯಗಳಲ್ಲಿನ ಶಿಕ್ಷಣ ಪದ್ಧತಿ ಸಾಕ್ಷಿ. ಪ್ರಸ್ತುತ ಕೇಂದ್ರ ಸರ್ಕಾರ ಸೇರಿದಂತೆ ಸ್ಥಳೀಯ ಸರ್ಕಾರಗಳು ಕೂಡ ಪ್ರಾಥಮಿಕ ಶಿಕ್ಷಣದಿಂದ ಉನ್ನತ ಶಿಕ್ಷಣವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿವೆ' ಎಂದರು.

ವಿಶ್ವದಲ್ಲೇ ಅತ್ಯಾಧಿಕ ವಿವಿಗಳು

ದೇಶದಲ್ಲಿನ ಶೇ. 50ರಷ್ಟು ಜನರು ಕೃಷಿ ಅವಲಂಬಿತರಾಗಿದ್ದಾರೆ. ಕೃಷಿಯಲ್ಲಿ ಹೊಸ ಹೊಸ ತಂತ್ರಜ್ಞಾನಗಳು ಹಾಗೂ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳುವ ಮೂಲಕ ಅಭಿವೃದ್ಧಿ ಸಾಧಿಸಬೇಕಿದೆ. ಸಂಶೋಧನಾ ವಿದ್ಯಾರ್ಥಿಗಳು ಕೃಷಿ ಕ್ಷೇತ್ರಕ್ಕೆ ಅಗತ್ಯವಾದ ಹೊಸ ಹೊಸ ತಂತ್ರಜ್ಞಾನಗಳ ಅಭಿವೃದ್ಧಿಗೆ ಮುಂದಾಗಬೇಕೆಂದ ಅವರು, ಭಾರತವು ಜಾಗತಿಕ ಮಟ್ಟದಲ್ಲಿ ಆರ್ಥಿಕ ಅಭಿವೃದ್ಧಿ ಮತ್ತು ರಕ್ಷಣಾ ವಲಯದಲ್ಲಿ ಸದೃಢವಾಗಿದೆ. ವಿಶ್ವದಲ್ಲಿಯೇ ಅತ್ಯಾಧಿಕ ವಿಶ್ವವಿದ್ಯಾಲಯಗಳನ್ನು ಹೊಂದಿದ್ದೇವೆ ಎಂದು ತಿಳಿಸಿದರು.

ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿದ್ದೇವೆ. ಆದರೆ, ದೇಶದ ಶಿಕ್ಷಣ ವ್ಯವಸ್ಥೆಯನ್ನು ಜಾಗತಿಕ ಮಟ್ಟದಲ್ಲಿ ಗುರುತಿಸಿಕೊಳ್ಳುವ ಮಟ್ಟಕ್ಕೆ ಅಭಿವೃದ್ಧಿ ಸಾಧಿಸಿಲ್ಲ' ಎಂದು ಹೇಳಿದರು.

'ಪೋಷಕರು ಹಾಗೂ ಅಧ್ಯಾಪಕರು ಮಕ್ಕಳನ್ನು ಪಠ್ಯ ಚಟುವಟಿಕೆಗಳಿಗೆ ಮಾತ್ರ ಸೀಮಿತಗೊಳಿಸಬೇಡಿ. ಶಿಕ್ಷಣ ಪಡೆಯುವುದು ಉದ್ಯೋಗ ಪಡೆಯುವುದಕ್ಕೆ ಎಂಬ ಭಾವನೆಯನ್ನು ಬಿಡಿ. ಜ್ಞಾನ ಸಂಪಾದನೆಗಾಗಿ ಎಂಬುದನ್ನು ಅರಿತು ಯೋಗ, ಆಹಾರ ಪದ್ಧತಿ ಹಾಗೂ ಕ್ರೀಡಾ ಚಟುವಟಿಕೆಗಳ ಬಗ್ಗೆ ಆಸಕ್ತಿ 'ಬೆಳೆಸಿ' ಎಂದು ಹೇಳಿದರು.

ನಿರುದ್ಯೋಗ ನಾಲ್ಕನೇ ಕೈಗಾರಿಕಾ ಕ್ರಾಂತಿಗೆ ಕಾರಣವಾಗಬಹುದು ಎಂದು ಹೇಳಲಾಗುತ್ತದೆ. ನಾವು ಇನ್ನಷ್ಟು ಸವಾಲುಗಳನ್ನು ಎದುರಿಸಲು ಸಜ್ಜಾಗಬೇಕಿದೆ. ಈ ನಿಟ್ಟಿನಲ್ಲಿ ಶಿಕ್ಷಣ ವ್ಯವಸ್ಥೆಯನ್ನು ಬಲಗೊಳಿಸಲು ಹೆಚ್ಚು ಶ್ರಮಿಸಬೇಕಿದೆ. ಸರ್ಕಾರವು ಸಹ ಒಂದೇ ರೀತಿಯ ಯೋಜನೆಗಳನ್ನು ರೂಪಿಸಬಾರದು, ಇತರೆ ಶಿಕ್ಷಣ ಸಂಸ್ಥೆಗಳೊಂದಿಗೆ ಕೈಜೋಡಿಸಿ ಶಿಕ್ಷಣಕ್ಕಾಗಿ ಉನ್ನತ ಮಾನದಂಡಗಳನ್ನು ರೂಪಿಸಬೇಕು ಎಂದು ತಿಳಿಸಿದರು.

ಅನುದಾನ ನೀಡುತ್ತಿಲ್ಲ

ನ್ಯಾಷನಲ್ ಪಬ್ಲಿಕ್ ಸ್ಕೂಲ್‌ನ ಅಧ್ಯಕ್ಷ ಡಾ. ಕೆ.ಪಿ.ಗೋಪಾಲಕೃಷ್ಣ ಮಾತನಾಡಿ, 'ಮಾಜಿ ಪ್ರಧಾನ ಡಾ. ಮನಮೋಹನ್‌ಸಿಂಗ್ ಅವರು 1991ರಲ್ಲಿ ವಿತ್ತ ಸಚಿವರಾಗಿದ್ದ ಸಂದರ್ಭದಲ್ಲಿ ಉದಾರೀಕರಣಕ್ಕೆ ಒತ್ತು ನೀಡಿದ್ದರು. ಇದರಿಂದ ದೇಶದಲ್ಲಿ ಬಹುರಾಷ್ಟ್ರೀಯ ಕಂಪನಿಗಳ ಸ್ಥಾಪನೆಯಿಂದ ಐಟಿ ವಲಯ ಬೆಳವಣಿಗೆಯಾಗಿದೆ. ಆದರೆ, ಸರ್ಕಾರಗಳು ಶಿಕ್ಷಣ ವ್ಯವಸ್ಥೆಯ ಅಭಿವೃದ್ಧಿಗೆ ಪೂರಕ ಅನುದಾನ ನೀಡುತ್ತಿಲ್ಲ' ಎಂದು ಹೇಳಿದರು.

ರಾಜ್ಯಸಭಾ ಸದಸ್ಯ ಕೆ.ಸಿ.ರಾಮಮೂರ್ತಿ, ಸಿಎಂಆರ್ ವಿಶ್ವವಿದ್ಯಾಲಯದ ಕುಲಪತಿ ಡಾ. ಸಬಿತಾ ರಾಮಮೂರ್ತಿ, ಸಂಸದ ಪಿ.ಸಿಮೋಹನ್ ಸೇರಿದಂತೆ ಮತ್ತಿತರರಿದ್ದರು.



ಹೆಣ್ಣೂರು ಮುಖ್ಯರಸ್ತೆಯಲ್ಲಿರುವ ಸಿಎಂಆರ್ ವಿಶ್ವವಿದ್ಯಾಲಯದ ನೂತನ ಕ್ಯಾಂಪಸ್‌ನ್ನು ಉಪರಾಷ್ಟ್ರಪತಿ ಎಂ.ವೆಂಕಯ್ಯನಾಯ್ಡು ಉದ್ಘಾಟಿಸಿದರು.

- ಕೃಷಿಯಲ್ಲಿ ಹೊಸ ತಂತ್ರಜ್ಞಾನ ಬಳಕೆಯಾಗಲಿ
- ಶಿಕ್ಷಣ ಕೇವಲ ಉದ್ಯೋಗಕ್ಕೆ ಸೀಮಿತವಾಗದಿರಲಿ
- ಉನ್ನತ ಶಿಕ್ಷಣಕ್ಕೆ ಪ್ರೋತ್ಸಾಹಿಸಲು ಕ್ರಮ ಅಗತ್ಯ